ಕರ್ನಾಟಕ ಪರೀಕ್ಷಾ ಪ್ರಾಧಿಕಾರ
KARNATAKA EXAMINATIONS AUTHORITY

ಸಂಖ್ಯೆ : ಇಡಿ/ಕೆಇಎ/ಆಡಳಿತ/ಸಿ.ಆರ್.19/2021 ದಿನಾಂಕ: 20.02.2022

## ಪ್ರಕಟಣೆ

### ಕಾಲೇಜು ಶಿಕ್ಷಣ ಇಲಾಖೆಯ ಸಹಾಯಕ ಪ್ರಾಧ್ಯಾಪಕರ ನೇಮಕಾತಿಯ ಪರಿಷ್ಕೃತ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಪ್ರಕಟಿಸಿರುವ ಬಗ್ಗೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಅರ್ಹ ಅಭ್ಯರ್ಥಿಗಳಿಗೆ ಮೂಲ ದಾಖಲೆಗಳ ಪರಿಶೀಲನೆಯನ್ನು ನಡೆಸಿ ಒಟ್ಟು 18 ವಿಷಯಗಳಿಗೆ ದಿನಾಂಕ 25.01.2023 ರಂದು ಮೆರಿಟ್ & ದಾಖಲಾತಿ ಪರಿಶೀಲನೆ ಹೊಂದಿದ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿರುತ್ತದೆ ಹಾಗೂ ದಿನಾಂಕ 30.01.2023 ರಂದು 18 ವಿಷಯಗಳಿಗೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ.

ಕರ್ನಾಟಕ ಸರ್ಕಾರವು ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 03 ಹೈಕಕೋ ದಿನಾಂಕ 01.02.2023 ರಲ್ಲಿ, ಆಯ್ಕೆ ಪ್ರಾಧಿಕಾರವು ಹುದ್ದೆಗಳ ನೇಮಕಾತಿಗೆ, ಅನುಸರಿಸಬೇಕಾದ ಆಯ್ಕೆ ವಿಧಾನವನ್ನು ಪರಿಷ್ಕರಿಸಿ ಆದೇಶ ಹೊರಡಿಸಿರುವುದರಿಂದ, ಸಹಾಯಕ ಪ್ರಾಧ್ಯಾಪಕರ ನೇಮಕಾತಿಗೆ ಆಯ್ಕೆ ವಿಧಾನವನ್ನು ಸರ್ಕಾರದ ಸುತ್ತೋಲೆಯಂತೆ ಮತ್ತು ಸರ್ಕಾರದ ವಿಶೇಷ ನೇಮಕಾತಿ ನಿಯಮಗಳ ಸಂಖ್ಯೆ No. ED 257 DCE 2019 (Part-3) ದಿನಾಂಕ 08.07.2020 ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ No. ED 257 DCE 2019 ದಿನಾಂಕ 26.08.2021 ರಲ್ಲಿ ಒದಗಿಸಲಾದ ನಿಯಮಾವಳಿಗಳಂತೆ ಕ್ರಮವಹಿಸಿ 26 ವಿಷಯಗಳಲ್ಲಿ 18 ವಿಷಯಗಳಿಗೆ ಪರಿಷ್ಕೃತ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ದಿನಾಂಕ 17.02.2023 ರಂದು ಪ್ರಕಟಿಸಲಾಗಿರುತ್ತದೆ.

ಪ್ರಾಧಿಕಾರವು ಪ್ರಕಟಿಸಲಾದ ಪರಿಷ್ಕೃತ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ, ದಿನಾಂಕ 24.02.2023ರ ಸಂಜೆ 5.30 ರೊಳಗೆ, ಪೂರಕ ದಾಖಲೆಗಳೊಂದಿಗೆ ಅಂಚೆ ಮೂಲಕ ಅಥವಾ ಖುದ್ದಾಗಿ ಪ್ರಾಧಿಕಾರಕ್ಕೆ ಆಕ್ಷೇಪಣೆಗಳನ್ನು ಸಲ್ಲಿಸಬಹುದಾಗಿರುತ್ತದೆ.

ಸಹಿ/-
(ಎಸ್.ರಮ್ಯ ಭಾ.ಆ.ಸೇ)
ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012.
18th Cross, Sampige Road, Malleshwaram, Bangalore – 560 012.
Phone: 080-2356 4583, 2336 1786, Fax: 080-2346 1576
Website : http://kea.kar.nic.in e-mail : keauthority-ka@nic.in